ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ
ದಿನಾಂಕ : DATE: 19/11/20

# ಮೀಸಲಾತಿ ಹೆಚ್ಚಳಕ್ಕೆ ತಯಾರಿ

## ಪರಿಶಿಷ್ಟ ಜಾತಿ, ಪಂಗಡಗಳ ಬೇಡಿಕೆಗೆ ಸ್ಪಂದನೆ • ಸಚಿವ ಸಂಪುಟ ಉಪ ಸಮಿತಿ ರಚನೆಗೆ ತೀರ್ಮಾನ

ಪ್ರಜಾವಾಣಿ ವಾರ್ತೆ 19-11-20

ಬೆಂಗಳೂರು: ಆಯಾ ಜಾತಿಯ ಜನ ಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಪ್ರಮಾಣವನ್ನು ಹೆಚ್ಚಿಸಬೇಕೆಂಬ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಬಹು ದಿನಗಳ ಬೇಡಿಕೆಗೆ ಸ್ಪಂದಿಸಿರುವ ರಾಜ್ಯ ಸರ್ಕಾರ ಈ ಸಂಬಂಧ ಸೂಕ್ತ ಶಿಫಾರಸುಗಳನ್ನು ಪಡೆಯಲು ಸಂಪುಟ ಉಪ ಸಮಿತಿಯನ್ನು ರಚಿಸಲು ತೀರ್ಮಾನಿಸಿದೆ.

ಬುಧವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ತೀರ್ಮಾನ ತೆಗೆದುಕೊಳ್ಳಲಾಗಿದ್ದು, ಉಪ ಸಮಿತಿ ರಚನೆಯ ಜವಾಬ್ದಾರಿಯನ್ನು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರಿಗೆ ಬಿಡಲಾಗಿದೆ.

ಪರಿಶಿಷ್ಟ ಜಾತಿಯ ಮೀಸಲಾತಿ ಪ್ರಮಾಣವನ್ನು ಶೇ 15ರಿಂದ 17ಕ್ಕೂ, ಪರಿಶಿಷ್ಟ ಪಂಗಡದ ಮೀಸಲಾತಿಯನ್ನು ಶೇ 3ರಿಂದ ಶೇ 7ಕ್ಕೆ ಹೆಚ್ಚಿಸಲು ಹೋರಾಟಗಳು ನಡೆದಿವೆ. ಈ ವರ್ಗಗಳಿಗೆ ಸೇರಿದ ಸಚಿವರು ಸರ್ಕಾರದ ಮೇಲೂ ಒತ್ತಡ ಹೇರುತ್ತಲೇ ಬಂದಿದ್ದಾರೆ.

ಬುಧವಾರ ಸಚಿವ ಸಂಪುಟ ಸಭೆಯಲ್ಲಿ ಅನೌಪಚಾರಿಕವಾಗಿ ಈ ವಿಷಯ ಪ್ರಸ್ತಾಪವಾಯಿತು. ಸಂಪುಟ ಉಪ ಸಮಿತಿ ರಚಿಸಿ ಸೂಕ್ತ ತೀರ್ಮಾನಕ್ಕೆ ಬರಬೇಕು ಎಂದು ಒಮ್ಮತದ ಅಭಿಪ್ರಾಯ ವ್ಯಕ್ತವಾಗಿದೆ.

'ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಮೀಸಲಾತಿ ಪ್ರಮಾಣ ನಿಗದಿ ಮಾಡಿ ಬಹಳ ವರ್ಷಗಳೇ ಕಳೆದಿವೆ. ಈಗ ಜನಸಂಖ್ಯೆಯೂ ಹೆಚ್ಚಾಗಿದೆ. ಮೀಸಲಾತಿ ಪ್ರಮಾಣವನ್ನು ಪರಿಷ್ಕರಿಸಬೇಕು ಎಂಬ ಒತ್ತಾಯ ಪ್ರಬಲವಾಗಿದೆ. ಮೀಸಲಾತಿ ಪ್ರಮಾಣ ಹೆಚ್ಚಿಸುವ ಬಗ್ಗೆ ಸಂಪುಟ ಉಪ ಸಮಿತಿ ಸುದೀರ್ಘವಾಗಿ ಚರ್ಚಿಸಿ ಸರ್ಕಾರಕ್ಕೆ ಶೀಘ್ರವೇ ಶಿಫಾರಸು ನೀಡಲಿದೆ' ಎಂದು ಕಾನೂನು ಸಚಿವ ಜೆ.ಸಿ.ಮಾಧುಸ್ವಾಮಿ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಈ ಕುರಿತು ಮಾತನಾಡಿದ ಸಮಾಜ ಕಲ್ಯಾಣ ಸಚಿವ ಬಿ.ಶ್ರೀರಾಮುಲು, 'ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಪ್ರಮಾಣ ಹೆಚ್ಚಿಸಬೇಕು ಎಂದು ಹಲವು ಸಂಘ–ಸಂಸ್ಥೆಗಳು ಒತ್ತಡ ಹೇರುತ್ತಲೇ ಬಂದಿವೆ. ನ್ಯಾ. ನಾಗಮೋಹನ್ ದಾಸ್ ಅವರ ಅಧ್ಯಕ್ಷತೆಯ ಆಯೋಗವೂ ಸರ್ಕಾರಕ್ಕೆ ಈ ಸಂಬಂಧ ವರದಿಯನ್ನು ನೀಡಿದೆ. ಸಂಪುಟ ಉಪ ಸಮಿತಿಯು ಆ ವರದಿಯ ಪರಾಮರ್ಶೆ ನಡೆಸಲಿದೆ' ಎಂದರು.

## ಹೊಸ ಜಿಲ್ಲೆ ವಿಜಯನಗರ

ಬಳ್ಳಾರಿ ಜಿಲ್ಲೆಯನ್ನು ವಿಭಜಿಸಿ ಹೊಸದಾಗಿ ವಿಜಯನಗರ ಜಿಲ್ಲೆ ರಚಿಸಲು ಬುಧವಾರ ನಡೆದ ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ.

'ಇದು ರಾಜ್ಯದ 31ನೇ ಜಿಲ್ಲೆಯಾಗಲಿದ್ದು, ಇದಕ್ಕೆ ಯಾವ ಯಾವ ತಾಲ್ಲೂಕುಗಳನ್ನು ಸೇರಿಸಬೇಕು ಎಂಬ ಬಗ್ಗೆ ಮುಂದಿನ ದಿನಗಳಲ್ಲಿ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳಲಾಗುವುದು' ಎಂದು ಅರಣ್ಯ ಸಚಿವ ಆನಂದ್ ಸಿಂಗ್ ಅವರು ಸಂಪುಟ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

'ವಿಜಯನಗರ ಜಿಲ್ಲೆ ರಚನೆಗೆ ಸಚಿವ ಸಂಪುಟದಲ್ಲಿ ಒಮ್ಮತದ ಒಪ್ಪಿಗೆ ಸಿಕ್ಕಿದೆ. ವಿಜಯನಗರ ಜಿಲ್ಲೆ ಸ್ಥಾಪನೆಗಾಗಿ ಹಲವು ದಶಕಗಳಿಂದ ಪಕ್ಷಾತೀತ ಹೋರಾಟ ನಡೆದಿತ್ತು. ಇದು ಜಿಲ್ಲಾ ಕೇಂದ್ರವಾಗಬೇಕು ಎಂಬುದು ಎಲ್ಲರ ಅಪೇಕ್ಷೆಯಾಗಿತ್ತು. ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಐತಿಹಾಸಿಕ ನಿರ್ಧಾರ ತೆಗೆದುಕೊಂಡಿದ್ದಾರೆ. ಜಿಲ್ಲೆಯ ವಿಭಜನೆಗೆ ಕೆಲವರ ವಿರೋಧವಿತ್ತು. ಅಂತಿಮವಾಗಿ ಎಲ್ಲರ ವಿಶ್ವಾಸವನ್ನು ತೆಗೆದುಕೊಂಡೇ ಈ ನಿರ್ಣಯ ತೆಗೆದುಕೊಳ್ಳಲಾಯಿತು' ಎಂದು ಆನಂದ್ ಸಿಂಗ್ ತಿಳಿಸಿದರು.

**'ಉತ್ತಮ ನಿರ್ಧಾರ':** ವಿಜಯನಗರ ಜಿಲ್ಲೆ ರಚಿಸಲು ಕೈಗೊಂಡ ತೀರ್ಮಾನವು ಆಡಳಿತಾತ್ಮಕವಾಗಿ ಉತ್ತಮ ನಿರ್ಧಾರ ಎಂದು ಸಮಾಜ ಕಲ್ಯಾಣ ಸಚಿವ ಬಿ. ಶ್ರೀರಾಮುಲು ಹೇಳಿದರು.

'ವಿಜಯನಗರ ಜಿಲ್ಲೆಯ ರಚನೆ ಬೇಡಿಕೆ ಮುಂದಿಟ್ಟು ಹೋರಾಟ ನಡೆದಿತ್ತು. ಈ ವಿಚಾರದಲ್ಲಿ ಕೆಲವು ಸಂದರ್ಭಗಳಲ್ಲಿ ಪರ ಮತ್ತು ವಿರೋಧ ಅಭಿಪ್ರಾಯ ವ್ಯಕ್ತವಾಗಿತ್ತು. ಅಂತಿಮವಾಗಿ ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡೇ ತೀರ್ಮಾನ ತೆಗೆದುಕೊಳ್ಳಲಾಗಿದೆ' ಎಂದು ಶ್ರೀರಾಮುಲು ಹೇಳಿದರು.

## ಡಿ .7ರಿಂದ 15ರವರೆಗೆ ಅಧಿವೇಶನ

ವಿಧಾನಮಂಡಲದ ಚಳಿಗಾಲದ ಅಧಿವೇಶನವನ್ನು ಡಿಸೆಂಬರ್ 7ರಿಂದ15ರವರೆಗೆ ಬೆಂಗಳೂರಿನಲ್ಲೇ ನಡೆಸಲು ಸಚಿವ ಸಂಪುಟ ಸಭೆ ತೀರ್ಮಾನಿಸಿದೆ.

ಚಳಿಗಾಲದ ಅಧಿವೇಶನವನ್ನು ಸಾಮಾನ್ಯವಾಗಿ ಬೆಳಗಾವಿಯ ಸುವರ್ಣಸೌಧದಲ್ಲಿ ನಡೆಸಲಾಗುತ್ತಿತ್ತು. ಕಳೆದ ವರ್ಷ ಬೆಳಗಾವಿ ಜಿಲ್ಲೆಯಲ್ಲಿ ಪ್ರವಾಹ ಪೀಡಿತ ಪ್ರದೇಶದಲ್ಲಿ ಪರಿಹಾರ ಕಾರ್ಯಕ್ಕೆ ತೊಂದರೆ ಆಗುತ್ತದೆ ಎಂಬ ಕಾರಣಕ್ಕೆ ಬೆಂಗಳೂರಿನಲ್ಲಿ ಅಧಿವೇಶನ ನಡೆಸಲಾಗಿತ್ತು. ಈ ವರ್ಷ ಕೋವಿಡ್ ಕಾರಣದಿಂದ ವಿಧಾನಸೌಧದಲ್ಲೇ ನಡೆಸಲು ತೀರ್ಮಾನಿಸಲಾಗಿದೆ ಎಂದು ಸಚಿವ ಸಂಪುಟ ಬಳಿಕ ಕಾನೂನು ಸಚಿವ ಜೆ.ಸಿ. ಮಾಧುಸ್ವಾಮಿ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

2021ನೇ ಸಾಲಿನಲ್ಲಿ ಘೋಷಿಸಲಾಗುವ 21 ಸಾರ್ವತ್ರಿಕ ರಜೆ ಹಾಗೂ 19 ನಿರ್ಬಂಧಿತ ರಜೆಗಳ ಪಟ್ಟಿಗೆ ಸಚಿವ ಸಂಪುಟ ಸಭೆ ಅನುಮೋದನೆ ನೀಡಿದೆ.

## 'ಮರಾಠಾ ಪ್ರಾಧಿಕಾರವಲ್ಲ, ನಿಗಮ'



'ಮರಾಠಾ ಅಭಿವೃದ್ಧಿ ನಿಗಮ ಸ್ಥಾಪನೆಗೆ ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ. ಪ್ರಾಧಿಕಾರದ ಬದಲು ನಿಗಮ ಸ್ಥಾಪಿಸಲು ತೀರ್ಮಾನಿಸಲಾಗಿದೆ' ಎಂದು ಸಚಿವ ಜೆ.ಸಿ. ಮಾಧುಸ್ವಾಮಿ ತಿಳಿಸಿದರು.'ಪ್ರಾಧಿಕಾರ ಮಾಡಬೇಕಾದರೆ ಪ್ರತ್ಯೇಕ ಕಾನೂನು ಮಾಡಬೇಕಾಗುತ್ತದೆ. ನಿಗಮದ ಸ್ಥಾಪನೆಯನ್ನು ಸರ್ಕಾರವೇ ಮಾಡಬಹುದಾಗಿದೆ. ನಿಗಮಕ್ಕೆ ಎಷ್ಟು ಹಣ ನಿಗದಿ ಮಾಡಬೇಕು ಎಂಬುದು ನಿರ್ಧಾರ ಆಗಿಲ್ಲ' ಎಂದು ಹೇಳಿದರು.

'ವೀರಶೈವ- ಲಿಂಗಾಯತ ಅಭಿವೃದ್ಧಿ ನಿಗಮದ ಸ್ಥಾಪನೆಗೆ ನಿರ್ಧಾರ ಕೈಗೊಳ್ಳಲಾಗಿದೆ. ಅದಕ್ಕೆ ಹಣ ನಿಗದಿ ಮಾಡುವ ಬಗ್ಗೆ ತೀರ್ಮಾನ ತೆಗೆದುಕೊಂಡಿಲ್ಲ' ಎಂದು ಅವರು ತಿಳಿಸಿದರು.

## 'ಬಂದ್‌ಗೆ ಅವಕಾಶ ನೀಡುವುದಿಲ್ಲ'

ನವದೆಹಲಿ: 'ರಾಜ್ಯದಲ್ಲಿನ ಮರಾಠಾ ಸಮುದಾಯದವರೂ ಕನ್ನಡಿಗರೇ. ಮರಾಠಾ ಅಭಿವೃದ್ಧಿ ನಿಗಮ ರಚನೆಯನ್ನು ವಿರೋಧಿಸಿ ಡಿಸೆಂಬರ್ 5ರಂದು ಕನ್ನಡಪರ ಸಂಘಟನೆಗಳು ನಡೆಸಲು ಉದ್ದೇಶಿಸಿರುವ ಕರ್ನಾಟಕ ಬಂದ್‌ಗೆ ಅವಕಾಶ ನೀಡುವುದಿಲ್ಲ' ಎಂದು ಯಡಿಯೂರಪ್ಪ ಹೇಳಿದರು. ಮರಾಠಾ ಸಮುದಾಯದವರು ಬೆಳಗಾವಿಯಲ್ಲಿ ಮಾತ್ರವಲ್ಲದೆ ರಾಜ್ಯದಾದ್ಯಂತ ಇದ್ದಾರೆ. ಮರಾಠಾ ಸಮುದಾಯದಲ್ಲಿನ ಹಿಂದುಳಿದವರ ನೆರವಿಗೆ ನಿಗಮ ರಚಿಸಲು ನಿರ್ಧರಿಸಲಾಗಿದೆ. ಬೆಳಗಾವಿಯಲ್ಲಿನ ಮರಾಠಿಗರು ಈ ಹಿಂದೆ ನಡೆದಿದ್ದ 'ವಿಶ್ವ ಕನ್ನಡ ಸಮ್ಮೇಳನ'ಕ್ಕೆ ಬೆಂಬಲ ನೀಡಿದ್ದರು ಎಂದು ಅವರು ತಿಳಿಸಿದರು.